**ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಉತ್ತರ ಕನ್ನಡ ಜಿಲ್ಲೆ, ಕಾರವಾರ**
ದೂರವಾಣಿ:08382-226589, Fax No: 08382-226589. Email ID:dobcmuttarakannada@gmail.com

ಸಂಖ್ಯೆ: ಬಿಸಿಡಬ್ಲ್ಯೂ/ಸಿಬ್ಬಂದಿ/ಸಿಆರ್-2/2016-17 ದಿನಾಂಕ: 15-06-2017

# ತಿಳುವಳಿಕೆ ಪತ್ರ

ಉತ್ತರ ಕನ್ನಡ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಅಡುಗೆಯವರು ಹಾಗೂ ಅಡಿಗೆ ಸಹಾಯಕರ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಆಯ್ಕೆ ಮಾಡುವ ಕುರಿತು ಪರಿಶೀಲನಾ ಪಟ್ಟಿಯನ್ನು ಜಿಲ್ಲಾ ವೆಬ್‌ಸೈಟ್‌ನಲ್ಲಿ ಪ್ರಚಾರ ಪಡಿಸಲಾಗಿದೆ (www.uttarakannada.nic.in) ಹಾಗೂ Cal Letter download ಮಾಡಿಕೊಳ್ಳಲು link ಒದಗಿಸಲಾಗಿದೆ. ಅಭ್ಯರ್ಥಿಗಳು call letter ನ್ನು download ಮಾಡಿಕೊಂಡು ಪರಿಶೀಲನಾ ಪಟ್ಟಿಯಂತೆ ಈ ಕೆಳಕಂಡ ವೃಂದಗಳಿಗೆ ಈ ಕೆಳಗೆ ನಮೂದಿಸಿದ ದಿನಾಂಕದಂದು ಬೆಳಿಗ್ಗೆ 10.00 ಗಂಟೆಗೆ ಸರ್ಕಾರಿ ಕಲಾ ಮತ್ತು ವಿಜ್ಞಾನ ಕಾಲೇಜು ಆವರಣದಲ್ಲಿ ಖುದ್ದಾಗಿ ಈ ಕೆಳಕಂಡ ಮೂಲ ದಾಖಲೆಗಳನ್ನು ಸಲ್ಲಿಸಲು ತಿಳಿಸಿದೆ. ಒಂದು ವೇಳೆ ನೀವು ಸದರಿ ದಿನದಂದು ಮಧ್ಯಾಹ್ನ 1.30 ಗಂಟೆಯೊಳಗಾಗಿ ಮೂಲ ದಾಖಲೆಗಳೊಂದಿಗೆ ಹಾಜರಾಗದೇ ಇದ್ದಲ್ಲಿ ಯಾವುದೇ ಮುನ್ಸೂಚನೇ ನೀಡದೇ ನೇಮಕಾತಿಯಿಂದ ಕೈ ಬಿಡಲಾಗುವುದು.

| ಅ. ನಂ | ಹುದ್ದೆಯ ಹೆಸರು | ದಾಖಲಾತಿ ಪರಿಶೀಲನಾ ದಿನಾಂಕ | ಸ್ಥಳ | ಸಮಯ |
|---|---|---|---|---|
| 1 | ಅಡುಗೆಯವರು | 22-06-2017 | ಸರ್ಕಾರಿ ಕಲಾ ಮತ್ತು ವಿಜ್ಞಾನ ಮಹಾವಿದ್ಯಾಲಯ ಕಾಲೇಜು ಕಾರವಾರ | ಬೆಳಿಗ್ಗೆ:10.00 ಗಂಟೆಗೆ |
| 2 | ಅಡುಗೆ ಸಹಾಯಕರು | 23-06-2017 | ಸರ್ಕಾರಿ ಕಲಾ ಮತ್ತು ವಿಜ್ಞಾನ ಮಹಾವಿದ್ಯಾಲಯ ಕಾಲೇಜು ಕಾರವಾರ | ಬೆಳಿಗ್ಗೆ:10.00 ಗಂಟೆಗೆ |

**ಪರಿಶೀಲನಾ ಸಮಯದಲ್ಲಿ ಅಭ್ಯರ್ಥಿಗಳು ಹಾಜರುಪಡಿಸಬೇಕಾದ ಮೂಲ ದಾಖಲೆಗಳು ಈ ಕೆಳಗಿನಂತಿವೆ.**

1. ಇತ್ತೀಚಿನ 2 ಪಾಸಪೋರ್ಟ ಅಳತೆಯ ಭಾವಚಿತ್ರಗಳು
2. ಎಸ್.ಎಸ್.ಎಲ್.ಸಿ ಮೂಲ ಅಂಕಪಟ್ಟಿ (ನೇಮಕಾತಿ ಅಧಿಸೂಚನೆಯಲ್ಲಿ ತಿಳಿಸಿರುವಂತೆ)
3. ವಯಸ್ಸಿನ ಬಗ್ಗೆ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ಜನನ ಪ್ರಮಾಣ ಪತ್ರ ಅಥವಾ ಎಸ್.ಎಸ್.ಎಲ್.ಸಿ ಮೂಲ ಟಿ.ಸಿ. ಪ್ರಮಾಣ ಪತ್ರ ಪರಿಶೀಲನೆಗಾಗಿ ಹಾಜರಪಡಿಸಬೇಕು.
4. ಜಾತಿಯ ಬಗ್ಗೆ ಮಿಸಲಾತಿ ಕೋರಿರುವ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಗಧಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಿಪಡಿಸುವುದು.
5. ಗ್ರಾಮೀಣ ಮೀಸಲಾತಿ ಹಾಗೂ ಕನ್ನಡ ಮಾಧ್ಯಮ ಮಿಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರಗಳನ್ನು ಹಾಜರಪಡಿಸಬೇಕು.
6. ಅಂಗವಿಕಲ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಜಿಲ್ಲಾ ವೈದ್ಯಾಧಿಕಾರಿ ಮಂಡಳಿಯಿಂದ ಪಡೆದ ಮೂಲ ಪ್ರಮಾಣ ಪತ್ರಗಳನ್ನು ಹಾಜರಪಡಿಸಬೇಕು.
7. ಮಾಜಿ ಸೈನಿಕರ ಮೀಸಲಾತಿ ಬಯಸಿದಲ್ಲಿ ಅಭ್ಯರ್ಥಿಗಳು ಸೈನಿಕ ಸೇವೆಯಲ್ಲಿ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ ಹಾಜರಪಡಿಸಬೇಕು.
8. ಯೋಜನಾ ನಿರಾಶ್ರಿತ ಮೀಸಲಾತಿ ಬಯಸಿದಲ್ಲಿ ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಮೂಲ ಪ್ರಮಾಣ ಪತ್ರ ಹಾಜರಪಡಿಸಬೇಕು.
9. ಸರಕಾರಿ ಸೇವೆಯಲ್ಲಿ ಇರುವವರು (ರಾಜ್ಯ/ಕೇಂದ್ರ) ಸಂಬಂಧಪಟ್ಟ ಇಲಾಖೆಯ ಸಕ್ಷಮ ಪ್ರಾಧಿಕಾರದಿಂದ ಪಡೆದ (N.O.C) ಮೂಲ ಪ್ರಮಾಣ ಪತ್ರವನ್ನು ಹಾಜರಪಡಿಸಬೇಕು.
10. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಬಗ್ಗೆ acknowdegement ಹಾಗೂ ಹಣ ತುಂಬಿದ ಬಗ್ಗೆ ಬ್ಯಾಂಕ್/ಆನ್‌ಲೈನ್‌ದಿಂದ ಪಡೆದ ಮೂಲ ಚಲನ ಪ್ರತಿಯನ್ನು ಹಾಜರಪಡಿಸಬೇಕು.
11. ಮಿಸಲಾತಿಗೆ ಸಂಬಂಧಿಸಿದಂತೆ ಅರ್ಜಿ ಹಾಕುವ ಸಮಯದಲ್ಲಿ ಅಪ್‌ಲೋಡ್ ಮಾಡಿರುವ ಇತರೆ ದಾಖಲೆಗಳು.
12. ಯಾವುದೇ ಆಕ್ಷೇಪಣೆಗಳು ಇದ್ದಲ್ಲಿ ಲಿಖಿತವಾಗಿ ದಿನಾಂಕ:20-06-2017 ರೊಳಗೆ ಮಾನ್ಯ ಜಿಲ್ಲಾಧಿಕಾರಿಗಳು/ಅಧ್ಯಕ್ಷರು ಆಯ್ಕೆ ಸಮಿತಿ ರವರಿಗೆ ಸಲ್ಲಿಸುವುದು ಅನಂತರ ಬಂದ ಯಾವುದೇ ಆಕ್ಷೇಪಣೆ/ದೂರು ಪರಿಗಣಿಸಲಾಗುವುದಿಲ್ಲ.

**ವಿಶೇಷ ಸೂಚನೆ: ಅಭ್ಯರ್ಥಿಗಳು ಅಧಿಸೂಚನೆಯ ಕೊನೆಯ ದಿನಾಂಕ:20-10-2016 ರ ಪೂರ್ವದಲ್ಲಿ ಪಡೆದ ಈ ಮೇಲಿನ ಎಲ್ಲ ಮೂಲ ದಾಖಲೆಗಳನ್ನು ಹಾಗೂ ಅವುಗಳ ಒಂದು ದೃಢೀಕೃತಪ್ರತಿಯನ್ನು ಪರಿಶೀಲನಾ ಸಮಯದಲ್ಲಿ ತಪ್ಪದೇ ಹಾಜರಪಡಿಸಬೇಕು.**

ಸದಸ್ಯ ಕಾರ್ಯದರ್ಶಿ ಹಾಗೂ
ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ
ಅಡಿಗೆಯವರು/ಅಡಿಗೆ ಸಹಾಯಕರ ಹುದ್ದೆಗಳ
ನೇರನೇಮಕಾತಿ ಸಮಿತಿ, ಉತ್ತರಕನ್ನಡ, ಕಾರವಾರ